<u>ಅಸಲು ದಾವಾ ಸಂಖ್ಯೆ **-15/2021**</u> ಪಿ.ಡಬ್ಲ್ಯೂ**:-1**

ದಿನಾಂಕಃ **18.02.2026** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ನನಗೆ ಓದು ಬರಹ ಬರುವುದಿಲ್ಲ. ಆದರೆ ಸಹಿ ಮಾಡಲು ಮಾತ್ರ ಬರುತ್ತದೆ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ತಂದೆಯ ಹೆಸರು ಸೇವ್ಯಾನಾಯ್ಕು ಯಾವಾಗ ತೀರಿಕೊಂಡಿರುತ್ತಾರೆ ಎಂದು ನನಗೆ ನಿರ್ದಿಷ್ಟವಾಗಿ ಗೊತ್ತಿಲ್ಲ. ಈಗ್ಗೆ ಸುಮಾರು **20** ವರ್ಷಗಳ ಹಿಂದೆ ತೀರಿಕೊಂಡಿರುತ್ತಾರೆ. ನನ್ನ ತಾಯಿ ರಮಣಿಬಾಯಿ ಈಗ್ಗೆ **2** ವರ್ಷಗಳ ಹಿಂದೆ ತೀರಿಕೊಂಡಿರುತ್ತಾರೆ. ಈ ದಾವೆಯನ್ನು ಈಗ್ಗೆ **2** ವರ್ಷಗಳ ಹಿಂದೆ ಸಲ್ಲಿಸಿದ್ದೇವೆ. ಈ ದಾವೆಯನ್ನು ಸಲ್ಲಿಸುವ ಸಮಯದಲ್ಲಿ ನನ್ನ ತಾಯಿ ಜೀವಂತವಾಗಿದ್ದರು. ನನ್ನ ತಾಯಿ ಕೊನೆಯ ಕಾಲದಲ್ಲಿ ನನ್ನ ಜೊತೆಯಲ್ಲಿದ್ದರು.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.